**ಸಾಕ್ಷಿಗೆ ದಿನಾಂಕಃ19-03-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ವಾದಿ ಪರ ಶ್ರೀ. HNR ವಕೀಲರಿಂದ ::**

ದಾವಾ ಶೆಡ್ಯೂಲ್ ಸ್ವತ್ತು ನಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುತ್ತದೆ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತನ್ನು ನಾನು ಖುದ್ದಾಗಿ ನೋಡಿರುತ್ತೇನೆ. ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ನಾನು ನೋಡಿರುತ್ತೇನೆ. ದಾವಾ ಶೆಡ್ಯೂಲ್ ಸ್ವತ್ತಿನ ಖಾತೆ ಪ್ರಸ್ತುತದಲ್ಲಿ ನಿರ್ಮಲ ಕೋಂ ನರೇಂದ್ರ ಎನ್ನುವವರ ಹೆಸರಿನಲ್ಲಿ ಇರುತ್ತದೆ. ಸದರಿ ನಿರ್ಮಲ ರವರು ಮೃತರಾಗಿದ್ದು ಅವರ ಮಗಳು ವಾದಿ ಆಗಿರುತ್ತಾಳೆ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತು ನಿರ್ಮಲ ರವರು ಕ್ರಯಕ್ಕೆ ಕೊಂಡುಕೊಂಡ ಸ್ವತ್ತಾಗಿರುತ್ತದೆ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತು ಮೂಲತಃ ಪುಟ್ಟಯ್ಯ ಎನ್ನುವವರಿಗೆ ಸೇರಿರುತ್ತದೆ ಎಂದರೆ ಸಾಕ್ಷಿಯು ಅದು ಪುರಸಭೆಗೆ ಸೇರಿದ ಆಸ್ತಿ ಆಗಿರುತ್ತದೆ. ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯು ನಿರ್ಮಲ ರವರ ಪೂರ್ವದಲ್ಲಿ ಪುಟ್ಟಯ್ಯ ರವರ ಹೆಸರಿನಲ್ಲಿ ಇತ್ತು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದಕ್ಕೂ ಪೂರ್ವದಲ್ಲಿ ಪುರಸಭೆ ಹೆಸರಿನಲ್ಲಿ ಇದ್ದು ಪುಟ್ಟಯ್ಯ ರವರ ಹೆಸರಿಗೆ ಮಾಡಿರುವ ಬಗ್ಗೆ ಯಾವುದೇ ಪೂರಕ ದಾಖಲಾತಿಗಳು ಇರುವುದಿಲ್ಲ ಎಂದು ನುಡಿದಿರುತ್ತಾರೆ.

ಪುಟ್ಟಯ್ಯ ರವರ ಮೃತರಾದ ನಂತರ ಪೌತಿ ಆಧಾರದಲ್ಲಿ ಅವರ ವಾರಸುದಾರರಿಗೆ ಖಾತೆ ಬದಲಾವಣೆ ಆಗಿತ್ತು ಎಂದರೆ ಸರಿ. ಪುಟ್ಟಯ್ಯನ ವಾರಸುದಾರರು ದಾವಾ ಶೆಡ್ಯೂಲ್ ಸ್ವತ್ತನ್ನು ನಿರ್ಮಲ ರವರಿಗೆ ಕ್ರಯಕ್ಕೆ ನೀಡಿರುತ್ತಾರೆ ಎಂದರೆ ಸರಿ. ಸಾಮಾನ್ಯವಾಗಿ ನಮ್ಮ ಪುರಸಭೆಯಲ್ಲಿ ಖಾತೆ ಬದಲಾವಣೆ ಮಾಡುವಾಗ ಮೂಲ ದಾಖಲೆ ಪರಿಶೀಲನೆ ಮಾಡುತ್ತೇವೆ ಎಂದರೆ ಸರಿ. ಮೊದಲಿನಿಂದ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಪುಟ್ಟಯ್ಯ ರವರ ಕುಟುಂಬದವರು ಇರುತ್ತಾರೆ ಎಂದರೆ ಸಾಕ್ಷಿಯು ನಾವು ಸ್ವಾಧೀನದಲ್ಲಿ ಇರುತ್ತೇವೆ ಎಂದು ನುಡಿಯುತ್ತಾರೆ. ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಪ್ರಸ್ತುತದಲ್ಲಿ ಒಂದು ಶೆಡ್ ಇರುತ್ತದೆ ಎಂದರೆ ಸರಿ. ಸದರಿ ಶೆಡ್ ದಾವಾ ಹುಡೂವ ಪೂರ್ವದಿಂದ ಇತ್ತು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ಶೆಡ್ ಅನ್ನು ದಾವೆ ಹೂಡುವ ಒಂದು ತಿಂಗಳ ಹಿಂದೆ ನಿರ್ಮಾಣ ಮಾಡಲಾಗಿರುತ್ತದೆ ಎಂದು ನುಡಿಯುತ್ತಾರೆ. ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ವಾದಿಗೆ ನಮ್ಮ ಪುರಸಭೆಯಿಂದ ನೋಟೀಸ್ ನೀಡಲಾಗಿರುತ್ತದೆ ಎಂದರೆ ಸರಿ. ಸದರಿ ನೋಟೀಸ್ ವಿರುದ್ದ ವಾದಿ

ಜಿಲ್ಲಾಧಿಕಾರಿಗಳಿಗೆ ಮೇಲ್ಮನವಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಡಿಸಿ ರವರು ವಾದಿಯ ವಿರುದ್ದ ಕಾನೂನು ರೀತ್ಯಾ ಕ್ರಮ ತೆಗೆದುಕೊಳ್ಳಬೇಕೆಂದು ಆದೇಶ ಮಾಡಿರುತ್ತಾರೆ ಎಂದರೆ ಸರಿ. ನಮ್ಮ ನೋಟೀಸ್ ನ ವಿರುದ್ದ ವಾದಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿಯು ಈ ದಾವೆಯಲ್ಲಿ ಏನೆಲ್ಲಾ ದಾಖಲೆ ಸಲ್ಲಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ನಿಪಿ5 ದಾಖಲೆ ವಾದಿ ಸಲ್ಲಿಸಿರುವ ರಿಟ್ ಅರ್ಜಿಗೆ ಸಂಬಂಧಪಟ್ಟಂತೆ ಆದೇಶ ಆಗಿರುತ್ತದೆ ಎಂದರೆ ಸಾಕ್ಷಿಯು ನಾನು ಇತ್ತೀಚೆಗೆ ಪುರಸಭೆಗೆ ಬಂದ ಕಾರಣ ನನಗೆ ಅದರ ಬಗ್ಗೆ ಅಷ್ಟಾಗಿ ಮಾಹಿತಿ ಇರುವುದಿಲ್ಲ. ನಾವು ನೀಡಿರುವ ನೋಟೀಸ್ ನಿಪಿ5 ರ ಪ್ರಕಾರ quash ಆಗಿರುತ್ತದೆ ಎಂದರೆ ಇರಬಹುದು. ನಿಡಿ1 ರಿಂದ 5 ನಮ್ಮ ಪುರಸಭೆಗೆ ಸಾರ್ವಜನಿಕರು ಸಲ್ಲಿಸಿರುವ ಅರ್ಜಿ ಆಗಿರುತ್ತದೆ ಎಂದರೆ ಸರಿ. ಸಾರ್ವಜನಿಕರು ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಅಸಲು ದಾವಾ 433/2021 ರಂತೆ ಒಂದು ದಾವೆ ಸಹ ವಾದಿಯ ವಿರುದ್ದ ಸಲ್ಲಿಸಿರುತ್ತಾರೆ ಎಂದರೆ ಸರಿ. ಸದರಿ ದಾವೆಯು ಏನಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಸದರಿ ದಾವೆಯು ಯಾವ ಕಾರಣಕ್ಕೆ ವಜಾ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ.

ನಿಡಿ6 ರಲ್ಲಿ ಪುಟ್ಟಯ್ಯ ರವರ ಹೆಸರು ಕಂಡು ಬರುತ್ತದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ದಾಖಲೆ ಬೇರೆ ಸ್ವತ್ತಿಗೆ ಸಂಬಂಧಪಟ್ಟಿದ್ದಾಗಿರುತ್ತದೆ ಎಂದು ನುಡಿಯುತ್ತಾರೆ. ಅದೇ ರೀತಿ ನಿಡಿ8 ರಲ್ಲಿ ಪುಟ್ಟಯ್ಯ ರವರ ಹೆಸರು ಕಂಡು ಬರುತ್ತದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದು ಕೈ ತಪ್ಪಿನಿಂದ ನಮೂದಾಗಿರುತ್ತದೆ ಎಂದು ನಾನು ತಿಳಿದುಕೊಂಡಿರುತ್ತೇನೆ ಎಂದು ನುಡಿಯುತ್ತಾರೆ. ಮೇಲೆ ಹೇಳಿದ ರಿಟ್ ಆದೇಶ ಹಾಗೂ ಡಿಸಿ ರವರ ಆದೇಶದಂತೆ ನಾವು ವಾದಿಯ ವಿರುದ್ದ ಕಾನೂನು ರೀತ್ಯಾ ಕ್ರಮ ತೆಗೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಇಲ್ಲಿಯವರೆಗೂ ವಾದಿಯ ಕುಟುಂಬದವರೇ ದಾವಾ ಶೆಡ್ಯೂಲ್ ಸ್ವತ್ತಿಗೆ ಕಂದಾಯ ಪಾವತಿ ಮಾಡುತ್ತಾ ಬಂದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿಯ ಕುಟುಂಬದವರೇ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ವಾದಿಯು ಅಕ್ರಮವಾಗಿ ಶೆಡ್ ಅನ್ನು ನಿರ್ಮಾಣ ಮಾಡಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಸಾರ್ವಜನಿಕರ ಚಿತ್ತಾವಣೆ ಮೇರೆಗೆ ವಾದಿಗೆ ತೊಂದರೆ ನೀಡುವ ದುರುದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: